8. ಬಿ.ಡಿ.ಎಸ್.ಎಸ್, ಸೊಸೈಟಿ, ಸೇವಾಲಯ, ಡಾ॥ ದ.ರಾ. ಬೇಂದ್ರೆ ರಸ್ತೆ, ಸಾಧನಕೇರಿ, ಧಾರವಾಡ–580008.

ಕರ್ನಾಟಕ ಗ್ರಾಮ ಪಂಚಾಯತ್ ರಾಜ್ ಕಾಯ್ದೆಗೆ ತಿದ್ದುಪಡಿ

1439 (1993); ಶ್ರೀ ಹ್ಯಾರೀಸ್ ಎನ್.ಎ. (ಶಾಂತಿನಗರ)

ಅ) 1993ರಲ್ಲಿ ರಾಜ್ಯದಲ್ಲಿ ಅನುಷ್ಠಾನಗೊಂಡ ಕರ್ನಾಟಕ ಗ್ರಾಮ ಪಂಚಾಯತ್ ರಾಜ್ ಕಾಯ್ದೆಗೆ ತಿದ್ದುಪಡಿ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ(ವಿವರ ನೀಡುವುದು);

ಆ) ಪಂಚಾಯತ್ ರಾಜ್ ವ್ಯವಸ್ಥೆಯ ಮೂಲಕ ಅಧಿಕಾರ ವಿಕೇಂದ್ರೀಕರಣ ವ್ಯವಸ್ಥೆಯನ್ನು ಜಾರಿಗೆ ತಂದ ಸದರಿ ಕಾಯ್ದೆಯನ್ನು ತಿದ್ದುಪಡಿ ಮಾಡುವ ಕುರಿತಾಗಿ ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಪ್ರಸ್ತುತ ಇರುವ ಕಾಯ್ದೆಯಲ್ಲಿನ ಲೋಪದೋಷಗಳು ಮತ್ತು ಬದಲಾದ ಕಾಲಗತಿಗೆ ಅನ್ವಯವಾಗುವಂತೆ ಅಳವಡಿಸಲು ರಚಿಸಿರುವ ಸಮಿತಿ ಕಾರ್ಯವ್ಯಾಪ್ತಿಯ ವಿವರಗಳೇನು?

ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಹೌದು: ಮಾಜಿ ವಿಧಾನ ಸಭಾ ಅಧ್ಯಕ್ಷರು ಹಾಗೂ ಪ್ರಸ್ತುತ ವಿಧಾನ ಸಭಾ ಸದಸ್ಯರಾದ ಶ್ರೀ ಕೆ.ಆರ್. ರಮೇಶ್‌ಕುಮಾರ್ ರವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ಕ್ಕೆ ತಿದ್ದುಪಡಿ ಸೂಚಿಸಲು ಸಮಿತಿಯನ್ನು ರಚಿಸಲಾಗಿದೆ.

ಆ) ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆ 1993ರನ್ನು ಸಮಗ್ರವಾಗಿ ಪರಿಶೀಲಿಸಲು ಹಾಗೂ ಗುಣಾತ್ಮಕ ಬದಲಾವಣೆಗೆ ತಿದ್ದುಪಡಿ

ಸೂಚಿಸಲು ರಚಿಸಿರುವ ಈ ಸಮಿತಿಗೆ ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಅಪಾರ ಅನುಭವ ಹೊಂದಿರುವ ತಜ್ಞರನ್ನು ಸಮಿತಿಯ ಸದಸ್ಯರನ್ನಾಗಿ ನೇಮಿಸಿದೆ. ತಜ್ಞರ ಸಮಿತಿಯು ಹೊರ ರಾಜ್ಯಗಳಿಗೆ ಪ್ರವಾಸ ಮಾಡಿ ಅಲ್ಲಿನ ಪಂಚಾಯತ್ ರಾಜ್ ವ್ಯವಸ್ಥೆಗಳ ಬಗ್ಗೆ ಅಧ್ಯಯನ ಮಾಡಿ ವರದಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ತಜ್ಞರ ಸಮಿತಿಯು ಈಗಾಗಲೇ ಮೂರು ಸುತ್ತಿನ ಸಭೆ ನಡೆಸಿರುತ್ತದೆ ಹಾಗೂ ಪಶ್ಚಿಮ ಬಂಗಾಳ, ಮಹಾರಾಷ್ಟ್ರ ಮತ್ತು ಛತ್ತೀಸ್‌ಘಡ ರಾಜ್ಯಗಳಿಗೆ ಪ್ರವಾಸ ಕೈಗೊಂಡು ಅಲ್ಲಿನ ವ್ಯವಸ್ಥೆಯನ್ನು ಸಮಿತಿಯಲ್ಲಿ ಚರ್ಚಿಸಿರುತ್ತದೆ.

ಇ) ಸಂವಿಧಾನದ 73ನೇ ತಿದ್ದುಪಡಿಯ ಆಶಯಗಳಂತೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರನ್ನು ಜಾರಿಗೊಳಿಸಿ 20 ವರ್ಷಗಳು ಕಳೆದಿದೆ. ಈ ಅವಧಿಯಲ್ಲಿ ಹಲವಾರು ಸಾಮಾಜಿಕ ಬದಲಾವಣೆಗಳಾಗಿದ್ದು, ಇಂದಿನ ಸಾಮಾಜಿಕ ಅವಶ್ಯಕತೆಗನುಗುಣವಾಗಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮವನ್ನು ಸಮಗ್ರವಾಗಿ ಪರಿಶೀಲಿಸಲು ಅಧಿಕಾರ ವಿಕೇಂದ್ರೀಕರಣ ತತ್ವವನ್ನು ಸದೃಢಗೊಳಿಸಲು ಹಾಗೂ ಹೊರ ರಾಜ್ಯಗಳಲ್ಲಿನ ಪಂಚಾಯತ್ ರಾಜ್ ವ್ಯವಸ್ಥೆಯನ್ನು ಸಮೀಕ್ಷಿಸಿ, ಪ್ರಸ್ತುತ ಇರುವ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ಕ್ಕೆ ಸಮಗ್ರ ತಿದ್ದುಪಡಿ ತರಲು ಈ ಸಮಿತಿಯನ್ನು ರಚಿಸಲಾಗಿದೆ.